

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ
Editor : MARUTI BASAVANTAPPA HOSAMANI
Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ
ಬಾಗಲಕೋಟೆಯಿಂದ ಪ್ರಕಟಿತ
RNI REG No. : KARKAN/2016/75068

SIHI KAHI
KANNADA DAILY MORNING
BAGALKOT

Volume : 07 Issue : 270 Wednesday 09-07-2025 E-mail : maruti.b.hosamani76@gmail.com Page: 4 Price : Rs. 1/-


## ವಕ್ಫ್ ತಿದ್ದುಪಡಿ ಹಿಂದಕ್ಕೆ – ಪಡೆಯಲು ಮನವಿ

**ಸಿಹಿ ಕಹಿ ಸುದ್ದಿ,**

**ತರೀಕೆರೆ** : ಇಸ್ಲಾಂ ಧರ್ಮದ ಪಾಲನೆಗೆ ಅಡ್ಡಿಯಾಗುವಂತಹ ಕಾಯಿದೆಯನ್ನು ಕೇಂದ್ರ ಸರ್ಕಾರ ಜಾರಿಮಾಡುತ್ತಿದೆ,ವಕ್ಫ್‌ಬೋರ್ಡ್ ಗೆ ತಿದ್ದುಪಡಿ ಮಾಡುತ್ತಿರುವುದನ್ನು ಖಂಡಿಸುತ್ತೇವೆ ಎಂದು ಗರ್ಲ್ಸ್ ಇಸ್ಲಾಮಿಕ್ ಆರ್ಗನೈಸನ್ ಜಿಲ್ಲಾ ಅಧ್ಯಕ್ಷರಾದ ಬಸಿರಾ ಬಾನು ಹೇಳಿದರು. ಅವರು ಇಂದು ಪಟ್ಟಣದ ಉಪ ವಿಭಾಗ ಅಧಿಕಾರಿಗಳ ಕಚೇರಿಯಲ್ಲಿ ಉಪ ವಿಭಾಗ ಅಧಿಕಾರಿ ಡಾ, ಕೆ.ಜೆ ಕಾಂತರಾಜ್ ಅವರಿಗೆ ಮನವಿ



ನೀಡಿ ಮಾತನಾಡಿದರು. ವಕ್ಫ್ ಬೋರ್ಡ್ ಗೆ ಅನ್ಯ ಧರ್ಮೀಯರ ನೇಮಕ ಮಾಡುವುದು ಕೇಂದ್ರ ಸರ್ಕಾರದ ನಿಲುವು ಸರಿಯಲ್ಲ, ಸಂವಿಧಾನ ಬದ್ಧವಾಗಿ ನಮಗೆ ನಮ್ಮ ಧರ್ಮ ಪಾಲನೆ ಬೇಕು ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಮಾಜಿ ಪುರಸಭಾ ಅಧ್ಯಕ್ಷರಾದ ಪರ್ವೀನ್ ತಾಜ್ ರವರು ಮಾತನಾಡಿ ಮುಸಲ್ಮಾನರು ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಅಭಿವೃದ್ಧಿ ಯಾಗಬೇಕು, ಆದರೆ ವಕ್ಫ್ ಬೋರ್ಡ್ ಗೆ ತಿದ್ದುಪಡಿ ತಂದಿರುವುದು ಸರಿಯಲ್ಲ ಸಂವಿಧಾನ ಬಾಹಿರವಾದದ್ದು. ಕೇಂದ್ರ ಸರ್ಕಾರ ನಮಗೆ ಸಮಾನತೆಯಿಂದ ಬದುಕಲು ಅವಕಾಶ ಮಾಡಬೇಕು. ವಕ್ಫ್ ಬೋರ್ಡ್ ತಿದ್ದುಪಡಿಯನ್ನು ಜಮಾತೆ ಇಸ್ಲಾಮಿ ಹಿಂದ್ ಸಂಘಟನೆಯ ಮಹಿಳಾ ಘಟಕ ತೀವ್ರವಾಗಿ ವಿರೋಧಿಸುತ್ತದೆ ಎಂದು ಹೇಳಿದರು.

ಉಪ ವಿಭಾಗ ಅಧಿಕಾರಿ ಡಾ. ಕೆ.ಜೆ ಕಾಂತರಾಜ್ ಮನವಿ ಸ್ವೀಕರಿಸಿ ಜಿಲ್ಲಾಧಿಕಾರಿಗಳ ಮುಖಾಂತರ ಸೂಕ್ತ ಕ್ರಮಕ್ಕೆ ಸರ್ಕಾರಕ್ಕೆ ಕಳುಹಿಸುತ್ತೇವೆ ಎಂದು ಹೇಳಿದರು. ಸ್ಥಾನಿಕ ಅಧ್ಯಕ್ಷರಾದ ನೂರಿನ್ ಬಾನು, ಶಾಹಿದ ಬಾನು, ದಿಲ್ ಶಾದ್ ಭಾನು, ಪುರಸಭಾ ನಾಮಿನಿ ಸದಸ್ಯರಾದ ಆದಿಲ್ ಪಾಷಾ, ಸೈಯದ್ ಇಸ್ಮಾಯಿಲ್, ಶೇಕ್ ದಾವಿದ್, ಸಮಾಜ ಸೇವಕರಾದ ರೋಷನ್ ಪಾಷಾ, ರವರು ಉಪಸ್ಥಿತರಿದ್ದು ವಾಕ್ಫ್ ತಿದ್ದುಪಡಿ ಹಿಂದಕ್ಕೆ ಪಡೆಯಲು ಮನವಿ ನೀಡಲಾಯಿತು.

**ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್. ಕೆ ನ್ಯೂಸ್ ಕನ್ನಡ ಚಾನಲ್: ಎನ್.ವೆಂಕಟೇಶ್. ತರೀಕೆರೆ. ಚಿಕ್ಕಮಗಳೂರು**

## "ಸ್ಲಂ ಶ್ರಾವಣಿ" ಪೋಸ್ಟರ್ – ಮಾಲಾಶ್ರೀ ಬಿಡುಗಡೆ



**ಸಿಹಿ ಕಹಿ ಸುದ್ದಿ,**

**ಬೆಂಗಳೂರ** : ಪೂರ್ವಿಕಾಮೃತ ಕ್ರಿಯೇಷನ್ ಬೆಂಗಳೂರ ಅವರ ದ್ವಿತೀಯ ಕಾಣಿಕೆ ಬಿ.ಪಿ ಹರಿಹರನ್ ನಿರ್ಮಾಣದ ಯುವ ನಿರ್ದೇಶಕಿ ರಶ್ಮಿ. ಎಸ್ ನಿರ್ದೇಶನದ "ಸ್ಲಂ ಶ್ರಾವಣಿ" ದಿ ಗ್ರೇಟ್ ಚಲನ ಚಿತ್ರದ ಶೀರ್ಷಿಕೆ ಮತ್ತು ಪೋಸ್ಟರ್ ಅನ್ನು ಕನಸಿನ ರಾಣಿ, ಆ?ಯಕ್ಷನ್ ಕ್ವೀನ್ ಮಾಲಾಶ್ರೀ ಬಿಡುಗಡೆ ಮಾಡಿದರು.

ನಂತರ ಮಾತನಾಡಿದ ಅವರು ಈ ಸಿನಿಮಾದ ಟೈಟಲ್ ಮತ್ತು ಪೋಸ್ಟರ್ ತುಂಬಾ ಆಕರ್ಷಕವಾಗಿವೆ. ಈ ಸಿನಿಮಾವನ್ನು ಆದಷ್ಟು ಬೇಗ ನಾನು ನೋಡ ಬೇಕೆಂದು ಕಾತುರದಿಂದ ಇದ್ದೇನೆ. ಸಿನಿಮಾ ಯಶಸ್ಸುಗಳಿಸಿ ಒಳ್ಳೆ ದುಡ್ಡು ಮಾಡಲಿ ಎಂದು ಚಿತ್ರ ತಂಡಕ್ಕೆ ಶುಭ ಹಾರೈಸಿದರು. ನಿರ್ದೇಶಕಿ ರಶ್ಮಿ.ಎಸ್ (ಸಾಯಿ ರಶ್ಮಿ) ಇಗಾಗಲೇ ಐದು ಸಿನಿಮಾಗಳನ್ನು ನಿರ್ದೇಶನ ಮಾಡಿದ್ರೂನು ನನ್ನ ಮೊದಲ ಸಿನಿಮಾದ ರೀತಿಯಲ್ಲೇ ಕೆಲಸ ಮಾಡ್ತಾ ಇದ್ದೇನೆ. ನನ್ನ ನಿರ್ದೇಶನದ "ಸುಮಾ ದಿ ಫ್ಲವರ್" ಚಿತ್ರಕ್ಕೆ ಸುಮಾರು 160 ಕ್ಕೂ ಹೆಚ್ಚು ಅಂತಾರಾಷ್ಟ್ರೀಯ ಪ್ರಶಸ್ತಿಗಳು ಜೊತೆಗೆ ಮುಂಬೈನಲ್ಲಿ ನಡೆದ ಪ್ರತಿಷ್ಠಿತ "ದಾದಾ ಸಾಹೇಬ್ ಫಾಲ್ಕೆ ಆಫ್ ಇಂಡಿಯಾ" ಪ್ರಶಸ್ತಿ ಲಭಿಸಿದೆ ಎಂದು ತಿಳಿಸಿದರು.

ಕಥೆಚಿತ್ರಕಥೆಬರೆದಎನ್.ಟಿಜಯರಾಮ್‌ರೆಡ್ಡಿಯವರ ಗರಡಿಯಲ್ಲೇ ನಾನು ಪಳಗಿದ್ದು ಹಲವಾರು ಚಲನ ಚಿತ್ರಗಳಲ್ಲಿ ನಟನೆ ಮತ್ತು ನಿರ್ದೇಶನ ಮಾಡಿದ್ದೇನೆ. ಈ ಚಿತ್ರದ ಕಥಾ ಹಂದರ ತುಂಬಾ ಚೆನ್ನಾಗಿದ್ದು,ಒಂದು ಸ್ಲಂ ಹುಡುಗಿಯ ಜೀವನದಲ್ಲಿ ನಡೆಯುವ ನೋವು, ಮುಳ್ಳುಗಳ ಹಾದಿಯಲ್ಲಿ ನಡೆದು ಮುಂದೆ ಒಂದು ಉನ್ನತ ಸ್ಥಾನಕ್ಕೆ ಹೋಗುವ ಕಥೆ "ಸ್ಲಂ ಶ್ರಾವಣಿ" ದಿ ಗ್ರೇಟ್ ಆಗಿದೆ. 45 ದಿನಗಳ ಕಾಲ ಬೆಂಗಳೂರು ಮೈಸೂರು ಸುತ್ತ ಮುತ್ತ ಚಿತ್ರೀಕರಣ ನಡೆಯಲಿದೆ. ನಾಲ್ಕು ಹಾಡುಗಳು ಚಿತ್ರದಲ್ಲಿವೆ ಎಂದು ನಿರ್ಮಾಪಕ ಹರಿಹರನ್.ಬಿ ಪಿ ಹೇಳಿದರು.

ತಾರಾಗಣದಲ್ಲಿ ಉಧೋ ಉಧೋ ರೇಣುಕಾ ಯಲ್ಲಮ್ಮ ಧಾರಾವಾಹಿಯ ಯಲ್ಲಮ್ಮ ಖ್ಯಾತಿಯ ಬೇಬಿ ಭೈರವಿ, ವಿಶೇಷ ಪಾತ್ರದಲ್ಲಿ ಐಶ್ವರ್ಯ ಶಿಂಧೋಗಿ, ಸನತ್, ಶಿವಕುಮಾರ್ ಆರಾಧ್ಯ, ಲಯನ್ ಸುರೇಶ್ (ಮೈಸೂರು), ನಾಗೇಂದ್ರ ಅರಸ್, ವಿಜಯಲಕ್ಷ್ಮಿ ಉಪಾಧ್ಯಾಯ, ಮಹೇಂದ್ರ ಮುನ್ನೋತ್, ಹೇಮಾ, ಮಂಜುಳಾ ರುದ್ರೇಶ್, ಮಾಸ್ಟರ್ ನಿಶ್ಚಲ್ (ಆದಿ) ಸೂರ್ಯೋದಯ (ಪರಮಾತ್ಮ ಸ್ಟುಡಿಯೋ) ಮುಂತಾದವರು ಅಭಿನಯಿಸುತ್ತಿದ್ದಾರೆ. ತಾಂತ್ರಿಕ ವರ್ಗದಲ್ಲಿ ಛಾಯಾಗ್ರಹಣ ಗಗನ್ ಆರ್ ಮತ್ತು ನಾಗೇಂದ್ರ ರಂಗರಿ, ಸಂಗೀತ ಎ.ಟಿ ರವೀಶ್, ಸಾಹಿತ್ಯ ಅರಸು ಅಂತಾರೆ ಮತ್ತು ರೇವಣ್ಣ ನಾಯಕ್, ಸಂಕಲನ ರವಿತೇಜ ಸಿ.ಹೆಚ್, ಪತ್ರಿಕಾ ಸಂಪರ್ಕ ಕಾರ್ತಿಕ್ ಸುಧನ್, ಡಾ, ಪ್ರಭು ಗಂಜಿಹಾಳ, ಡಾ, ವೀರೇಶ್ ಹಂಡಿಗಿ ಅವರದಿದೆ. ಸದ್ಯ ಚಿತ್ರೀಕರಣ ಆರಂಭವಾಗಲಿದ್ದು ವರ್ಷಾಂತ್ಯಕ್ಕೆ ಚಿತ್ರ ಬಿಡುಗಡೆ ಮಾಡುವ ಆಲೋಚನೆ ಚಿತ್ರ ತಂಡಕ್ಕಿದೆ.

**– ಡಾ, ಪ್ರಭು ಗಂಜಿಹಾಳ ಮೊ:9448775346**

## ಭಗವತ್ ಪ್ರೇಮ ಭಾಗವತದ ಮುಖ್ಯ ಸಂದೇಶ – ಸ್ವಾಮಿ ನಿರ್ಭಯಾನಂದ ಸರಸ್ವತಿ

**ಸಿಹಿ ಕಹಿ ಸುದ್ದಿ,**

**ಚಳ್ಳಕೆರೆ** : ಭಗವತ್ ಪ್ರೇಮವನ್ನು ಬೆಳೆಸಿ ಕೊಳ್ಳಬೇಕು ಎಂದು ಶ್ರೀಮದ್ ಭಾಗವತ ತಿಳಿಸುತ್ತದೆಂದು ಗದಗ ವಿಜಯಪುರದ ಶ್ರೀರಾಮಕೃಷ್ಣ ವಿವೇಕಾನಂದ ಆಶ್ರಮದ ಅಧ್ಯಕ್ಷರಾದಪೂಜ್ಯಸ್ವಾಮಿನಿರ್ಭಯಾನಂದ ಸರಸ್ವತಿ ತಿಳಿಸಿದರು. ನಗರದ ವಾಸವಿ ಕಾಲೋನಿಯ ಶ್ರೀಶಾರದಾಶ್ರಮದ ದೇವಸ್ಥಾನದಲ್ಲಿ ನಡೆಯುತ್ತಿರುವ "ಶ್ರೀಮದ್ ಭಾಗವತ ಪ್ರವಚನ ಸಪ್ತಾಹ" ಕಾರ್ಯಕ್ರಮದದಿವ್ಯಸಾನಿಧ್ಯವಹಿಸಿಅವರು "ದಿವ್ಯತ್ರಯರು ಮತ್ತು ಶ್ರೀಮದ್ ಭಾಗವತ" ಎಂಬ ವಿಷಯವಾಗಿ ಪ್ರವಚನ ನೀಡಿದರು. ದಿವ್ಯತ್ರಯರ ಜೀವನದ ಘಟನೆಗಳಿಗೂ ಭಾಗವತಕ್ಕೂ ಸಂಬಂಧವಿದ್ದು ಮಹಾತ್ಮರ ಜೀವನದಲ್ಲಿ ವ್ಯಕ್ತವಾಗುವ ಅಹೇತುಕ ಪ್ರೀತಿ ಅನಂತವಾದದ್ದು. ಆದ್ದರಿಂದ ಭಾಗವತದ



ಸಂದೇಶಗಳನ್ನು ಮತ್ತು ಘಟನೆಗಳನ್ನು ಮೆಲುಕು ಹಾಕಿ ಅನುಸಂಧಾನ ಮಾಡಬೇಕು ಎಂದು ಹೇಳಿದರು. ಈ ಸತ್ಸಂಗದ ಪ್ರಯುಕ್ತ ನವಲಗುಂದದ ಶ್ರೀಶಾರದೇಶ್ವರಿ ಆಶ್ರಮದ ಅಧ್ಯಕ್ಷರಾದ ಪೂಜ್ಯ ಮಾತಾಜೀ ಅನನ್ಯಮಯೀ ಅವರು ವಿಶೇಷ ಭಜನೆಯನ್ನು ನಡೆಸಿ ಕೊಟ್ಟರು. ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಮಾತಾಜೀ ತ್ಯಾಗಮಯೀ ವಹಿಸಿದ್ದರು. ಸತ್ಸಂಗ ಕಾರ್ಯಕ್ರಮದಲ್ಲಿ ಶತಾಯುಷಿ ಸೂಲಗಿತ್ತಿ ತಳುಕಿನ ತಿಮ್ಮಕ್ಕ,ಪಾಲಕ್ಕ, ಬೋರಣ್ಣ, ವಿನೋದಮ್ಮ, ಶ್ರೀಮತಿ ಶಾರದಾಮ್ಮ, ಶಾರದಾ, ಜಿ.ಗೀತಾ, ಯತೀಶ್ ಎಂ ಸಿದ್ದಾಪುರ, ಮದ್ದಿಹಳ್ಳಿ ಜಯಪ್ಪ, ನಾಗರಾಜ್, ಕೆಂಚಮ್ಮ, ಮಹಾದೇವಮ್ಮ, ಶಿವಕುಮಾರ್, ಗೌರಮ್ಮ,ಗೀತಾ ನಾಗರಾಜ್, ಹೂವಿನ ಲಕ್ಷ್ಮೀದೇವಮ್ಮ, ಸೌಮ್ಯ, ಮಹೇಶ್, ಚೇತನ್, ಮಲ್ಲಮ್ಮ, ಅನಂತರಾಮ್ ಗೌತಮ್, ಮಂಜುಳ, ಭ್ರಮರಂಭಾ, ವನಜಾಕ್ಷಿ ಮೋಹನ್, ಅಭೀಷೇಕ್, ಸುಗುಣಾ, ಸುಮ ಪ್ರಕಾಶ್ ಸೇರಿದಂತೆ ಅಪಾರ ಸಂಖ್ಯೆಯ ಭಕ್ತಗಡಣ ಭಾಗವಹಿಸಿತ್ತು.

**ವರದಿ : ಯತೀಶ್.ಎಂ ಸಿದ್ದಾಪುರ, ಚಳ್ಳಕೆರೆ.**

### ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ

## ಹಳಕಟ್ಟಿಯಂತಹ ಶರಣರು ಕೋಟಿಗೊಬ್ಬರು

**ಬನಹಟ್ಟಿ** : ಹನ್ನೆರಡನೆಯ ಶತಮಾನದ ಶರಣರವಚನಗಳನ್ನುಸಂಶೋಧಿಸಿದಡಾ.ಫ. ಗು. ಹಳಕಟ್ಟಿಯಂತವರು ಕೋಟಿಗೊಬ್ಬರು. ಹಳಕಟ್ಟಿಯವರು ನಿರಂತರ ನಿರಂಜನ ಪರಂಜ್ಯೋತಿಯಾಗಿದ್ದರು ಎಂದು ಹಾರೂಗೇರಿಯ ನಿವೃತ್ತ ಪ್ರಾಚಾರ್ಯ, ಸಾಹಿತಿ ವಿ. ಎಸ್. ಮಾಳಿ ತಿಳಿಸಿದರು.



ಅವರು ಬುಧವಾರ ಇಲ್ಲಿನ ಭದ್ರನವರ ಕಲ್ಯಾಣ ಮಂಟಪದಲ್ಲಿ ಡಾ. ಹಳಕಟ್ಟಿಯವರ ಅಭಿಮಾನಿ ಬಳಗದವರು, ವಚನ ಸಂರಕ್ಷಣಾ ದಿನಾಚರಣೆಯ ಅಂಗವಾಗಿ ಹಮ್ಮಿಕೊಂಡ ಮಹಾಶರಣರು ಕೃತಿಯ ಲೋಕಾರ್ಪಣೆಯ ಸಂದರ್ಭದಲ್ಲಿ ಕೃತಿಯ ಕುರಿತು ಮಾತನಾಡಿದರು.

ಬಸವಣ್ಣ ಹಾಗೂ ಶರಣರಿಂದಾಗಿ ಹನ್ನೆರಡನೆಯ ಶತಮಾನದ ಎಲ್ಲ ದಾರಿಗಳು ಕಲ್ಯಾಣವನ್ನೇ ಕೂಡುತ್ತಿದ್ದವು. ಒಡೆದು ಹೋಗಿದ್ದ ಹೊಸ ಕಲ್ಯಾಣವನ್ನು ನಿರ್ಮಾಣ ಮಾಡಿದವರು ಡಾ. ಹಳಕಟ್ಟಿಯವರು. ಹಳಕಟ್ಟಿಯವರನ್ನು ವಚನ ಪಿತಾಮಹರನ್ನಾಗಿ ಮಾಡಿದ್ದು ಬನಹಟ್ಟಿ. ಅವರ ಜಯಂತ್ಯೋತ್ಸವದ ಸಂದರ್ಭದಲ್ಲಿ ಅವರ ಅಭಿಮಾನಿ ಬಳಗದವರು ಐವರು ಶರಣರ ಚರಿತ್ರೆಗಳನ್ನು ಒಳಗೊಂಡ 'ಮಹಾಶರಣರು' ಕೃತಿಯನ್ನು ಬಿಡುಗಡೆ ಮಾಡುತ್ತಿರುವುದು ಸ್ತುತ್ಯ ಕಾರ್ಯವಾಗಿದೆ ಎಂದು ವಿ. ಎಸ್. ಮಾಳಿ ತಿಳಿಸಿದರು.

ಗದಗ ಜಿಲ್ಲೆಯ ನಿವೃತ್ತ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ.ಸಂಕದ ಮಾತನಾಡಿ, ಶರಣರು ಸಮಾಜ ಮತ್ತು ಮಾನವ ಕಲ್ಯಾಣದ ಉದ್ಧಾರಕ್ಕಾಗಿ ಬದುಕಿದವರು. ಶರಣರ ನಡೆ ನುಡಿಗಳು ನಮಗೆ ಆದರ್ಶವಾಗಬೇಕು. ಮುಂದಿನ ಜನಾಂಗಕ್ಕೆ ಶರಣ ಸಾಹಿತ್ಯವನ್ನು ಪರಿಚಯಿಸುವ ಮಹತ್ತರ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು.

ರಬಕವಿಯ ಗುರುದೇವ ಬ್ರಹ್ಮಾನಂದ ಆಶ್ರಮದ ಗುರುಸಿದ್ಧೇಶ್ವರ ಸ್ವಾಮೀಜಿ ಮಾತನಾಡಿ, ಶರಣರ ವಚನಗಳು ಹಾಗೂ ವಿಚಾರಗಳು ಪ್ರತಿಯೊಬ್ಬರ ಮನೆ ಮನೆಗೆ ತಲುಪಬೇಕು.

ವಚನಗಳ ಮೂಲಕ ಶರಣರ ವಚನಗಳನ್ನು ಅರಿತುಕೊಳ್ಳಬೇಕು. ಪ್ರತಿಯೊಬ್ಬರು ಗ್ರಂಥಗಳನ್ನು ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮರೇಗುದ್ದಿ ಅಡವಿ ಸಿದ್ಧೇಶ್ವರ ಮಠದ ನಿರುಪಾಧೀಶ್ವರ ಸ್ವಾಮೀಜಿ, ಬನಹಟ್ಟಿಯ ಹಿರೇಮಠದ ಸ್ವಾಮೀಜಿ, ಹಳಕಟ್ಟಿ ಗೆಳೆಯರ ಬಳಗದ ಸಂಚಾಲಕ ಸುರೇಶ ಕೋಲಾರ, ವೈ. ಬಿ. ಕೊರಡೂರ ಮಾತನಾಡಿದರು.

ನಗರದ ಗಣ್ಯರಾದ ಬಸವರಾಜ ಭದ್ರನವರ ಅಧ್ಯಕ್ಷತೆ ವಹಿಸಿದ್ದರು.

ಶ್ರೀಶೈಲ ಧಬಾಡಿ, ಶಂಕರ ಜುಂಜಪ್ಪನವರ, ಭೀಮಶಿ ಮಗದುಮ್, ಬಸವಂತ ಜಾಡಗೌಡ, ಮಲ್ಲಿಕಾರ್ಜುನ ತುಂಗಳ, ವಿರುಪಾಕ್ಷಪ್ಪ ಕೊಕಟನೂರ, ಸಿದ್ಧನಗೌಡ ಪಾಟೀಲ, ಶ್ರೀಪಾದ ಬಾಣಕಾರ, ಜಯವಂತ ಕಾಡದೇವರ, ಜಿ. ಎಸ್. ವಡಗಾಂವಿ, ಮಲ್ಲೇಶಪ್ಪ ಕುಚನೂರ, ಶಿವಾನಂದ ದಾಶ್ಯಾಳ, ಶಿವಕುಮಾರ ಜುಂಜಪ್ಪನವರ, ಶೈಲಜಾ ನುಚ್ಚಿ, ಮಹಾನಂದಾ ಕುಳ್ಳಿ, ಪ್ರಭಾವತಿ ಸುಟ್ಟಟ್ಟಿ ಸೇರಿದಂತೆ ಇನ್ನೂ ಅನೇಕರು ಪಾಲ್ಗೊಂಡಿದ್ದರು.

## ಪಿಕೆಪಿಎಸ್: ಅಧ್ಯಕ್ಷ, ಉಪಾಧ್ಯಕ್ಷರ ಅವಿರೋಧ ಆಯ್ಕೆ



**ಚಿಮ್ಮಡ** : ಇಲ್ಲಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸೊಸೈಟಿಯ ಆಡಳಿತ ಮಂಡಳಿಯ ಅಧ್ಯಕ್ಷ ಉಪಾಧ್ಯಕ್ಷರ ಸ್ಥಾನಗಳಿಗೆ ಬುಧವಾರ ನಡೆದ ಚುನಾವಣೆಯಲ್ಲಿ ಅವಿರೋಧ ಆಯ್ಕೆ ನಡೆಯಿತು.

ಆಡಳಿತ ಮಂಡಳಿಯ ಸದಸ್ಯರ ನಡುವೆ ಈ ಹಿಂದೆ ಮಾಡಿಕೊಂಡ ಒಪ್ಪಂದದಂತೆ ಹಿಂದಿನ ಅಧ್ಯಕ್ಷ ಉಪಾಧ್ಯಕ್ಷರು ರಾಜಿನಾಮೆ ಸಲ್ಲಿಸಿದ ಪ್ರಯುಕ್ತ ಆ ಸ್ಥಾನಗಳಿಗೆ ಇಂದು ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ಆಡಳಿತಮಂಡಳಿಯಅಧ್ಯಕ್ಷ,ಉಪಾಧ್ಯಕ್ಷರಸ್ಥಾನಗಳಿಗೆ ಕೇವಲ ಒಂದೊಂದೇ ನಾಮಪತ್ರ ಸಲ್ಲಿಕೆಯಾಗಿದ್ದವು. ಅಧ್ಯಕ್ಷ ಸ್ಥಾನಕ್ಕೆ ನಾಮಪತ್ರ ಸಲ್ಲಿಸಿದ್ದ ಚನ್ನಪ್ಪ ಬಿಳ್ಳೂರ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ನಾಮಪತ್ರ ಸಲ್ಲಿಸಿದ್ದ ಪ್ರಭು ಗೋವಿಂದಗೋಳ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಚುನಾವಣಾಧಿಕಾರಿಗಳಾಗಿ ಆಗಮಿಸಿದ್ದ ತಾಲೂಕಾ ಸಹಕಾರಿ ಸಂಘಗಳ ಮಾರಾಟ ವಿಭಾಗದ ಅಧಿಕಾರಿ ಎಂ. ಎಸ್. ಘೋಲಪ ಘೋಷಿಸಿದರು.

ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷ ಶಂಕರ ಬಟಕುರ್ಕಿ, ಬೀರಪ್ಪಾ ಹಳೆಮನಿ, ಗುರುಲಿಂಗಪ್ಪಾ ಪೂಜಾರಿ, ಮನೋಜ ಹಟ್ಟಿ, ಹಿಂದಿನ ಅಧ್ಯಕ್ಷ ಹಣಮಂತ ನೇಸೂರ ನಿರ್ದೇಶಕರಾದ ನಿಂಗಣ್ಣ ಪೂಜಾರಿ, ವಿರುಪಾಕ್ಷ ಕುದರಿ, ರಾಮಪ್ಪ ಜಗದಾಳ, ಸಿದ್ರಾಮಪ್ಪ ಮುನ್ನೋಳ್ಳಿ, ಹಣಮಂತ ಕೋಳಿ, ಶ್ರೀಮತಿ ಅನ್ನಪೂರ್ಣ ಮುಗಳಖೋಡ, ಬೀರಪ್ಪ ಗಡದಿ, ಗಿರಮಲ್ಲಪ್ಪಾ ಹಟ್ಟಿ, ವ್ಯವಸ್ಥಾಪಕ ಎಂ. ವ್ಹಿ. ವಜ್ಜರಮಟ್ಟಿ, ಮಲ್ಲಯ್ಯ ಮಠಪತಿ, ಮಹಾಲಿಂಗ ಹಳ್ಳೂರ ಸೇರಿದಂತೆ ಇನ್ನೂ ಹಲವಾರು ಜನ ಪ್ರಮುಖರು ಉಪಸ್ಥಿತರಿದ್ದರು.

## ಪತ್ರಿಕೆಗಳಲ್ಲಿ ಬರುವ ಸುದ್ದಿಗಳು ನೈಜತೆಯಿಂದ ಕೂಡಿರುತ್ತವೆ; ಆನಂದ ನ್ಯಾಮಗೌಡ

**ಜಮಖಂಡಿ:** ಪತ್ರಿಕೆಗಳಲ್ಲಿಸುದ್ದಿಪ್ರಕಟವಾದರೆ ಜನರು ನಂಬುತ್ತಾರೆ. ಪತ್ರಿಕೆಗಳಲ್ಲಿ ಪ್ರಕಟವಾದ ವರದಿಗಳನ್ನು ಉಲ್ಲೇಖಿಸಿ ಜನಪ್ರತಿನಿಧಿಗಳು ಶಾಸನ ಸಭೆಗಳಲ್ಲಿ ಮಾತನಾಡಿದ ಉದಾಹರಣೆಗಳು ಸಾಕಷ್ಟಿವೆ. ಹಾಗಾಗಿ ಪತ್ರಿಕೆಗಳಲ್ಲಿ ಬರುವ ಸುದ್ದಿಗಳನ್ನು ಅಧಿಕೃತ ಎಂದು ಪರಿಗಣಿಸಲಾಗುತ್ತದೆ ಎಂದು ಮಾಜಿ ಶಾಸಕ ಆನಂದ ನ್ಯಾಮಗೌಡ ಹೇಳಿದರು.



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಮಖಂಡಿ ಘಟಕದ ಆಶ್ರಯದಲ್ಲಿ ಸಂಘದಕಚೇರಿಆವರಣದಲ್ಲಿಮಂಗಳವಾರ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ, ಪ್ರಶಸ್ತಿ ಪ್ರದಾನ, ಪ್ರತಿಭಾ ಪುರಸ್ಕಾರ ಹಾಗೂ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅವಸರದ ಸುದ್ದಿಗಿಂತ ಸರಿಯಾದ ಸುದ್ದಿಗಳನ್ನು ಪತ್ರಕರ್ತರು ಪತ್ರಿಕೆಗಳಿಗೆ ಕೊಡಬೇಕು. ಒರೆಗೆ ಹಚ್ಚದೆ ಸುದ್ದಿಯನ್ನು ಕೊಟ್ಟು ಯಾವುದೇ ವ್ಯಕ್ತಿಯ ಅಥವಾ ಸಂಸ್ಥೆಯ ತೇಜೋವಧೆ ಆಗಬಾರದು. ಆಯುಧದಿಂದ ಮಾಡಲಾಗದ ಕೆಲಸವನ್ನು ಪತ್ರಕರ್ತರು ತಮ್ಮ ಹತ್ತಿರದ ಲೇಖನಿಯಿಂದ ಮಾಡಬಹುದು. ಉತ್ತಮ ಸಮಾಜ ಕಟ್ಟುವಲ್ಲಿ ಪತ್ರಕರ್ತರ ಲೇಖನಿ ಬಳಕೆಯಾಗಬೇಕು ಎಂದರು.

ಓಲೆಮಠದ ಆನಂದ ದೇವರು ಶ್ರೀಗಳು ಸಾನಿಧ್ಯವಹಿಸಿ ಮಾತನಾಡಿ, ಪತ್ರಕರ್ತರು ಎಂದರೆ ಸತ್ಯ ಪರಿಶೋಧಕರು. ಪ್ರತ್ಯಕ್ಷ ಕಂಡರೂ ಪ್ರಮಾಣಿಸಿ ನೋಡಿ ವರದಿಗಳನ್ನು ನೀಡಬೇಕು. ಝೀರೋ ಇರುವವರನ್ನು ಹೀರೋ ಅಥವಾ ಹೀರೋ ಇರುವವರನ್ನು ಝೀರೋ ಮಾಡುವ ಶಕ್ತಿ ಪತ್ರಕರ್ತರಿಗಿದೆ ಎಂದು ಹೇಳಿದರು.

ಸಣ್ಣ ಸಣ್ಣ ಸಮಾಜ ಸೇವಕರನ್ನು ಪತ್ರಕರ್ತರು ಗುರುತಿಸಬೇಕು. ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಕೆಲಸವನ್ನು ಪ್ರಾಮಾಣಿಕವಾಗಿ ಮಾಡಬೇಕು. ಒಂದು ಕಾಲದಲ್ಲಿ ಮಂತ್ರ, ತಂತ್ರ, ಯಂತ್ರ ಕೆಲಸ ಮಾಡುತ್ತಿದ್ದವು. ಆದರೆ, ಇಂದು ಕುತಂತ್ರ, ಷಡ್ಯಂತ್ರ ಕೆಲಸ ಮಾಡುತ್ತಿವೆ. ಆದ್ದರಿಂದ ಅಂತರಂಗವನ್ನು ಶುದ್ಧವಾಗಿಟ್ಟುಕೊಂಡು ಪತ್ರಕರ್ತರು ಕರ್ತವ್ಯ ನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಖ್ಯಾತ ಸ್ತ್ರೀರೋಗ ತಜ್ಞೆ ಡಾ. ವಿಜಯಲಕ್ಷ್ಮೀ ಬಾಬುರೆಡ್ಡಿ ತುಂಗಳ ಮಾತನಾಡಿ, ಪತ್ರಕರ್ತ ದಿವಂಗತ ಬಾಬುರೆಡ್ಡಿ ತುಂಗಳ ಅವರು ತಮ್ಮ ಆರ್ಥಿಕ ಸಂಕಷ್ಟದ ದಿನಗಳಲ್ಲೂ ಸಹ ಜನಪರ ಹೋರಾಟ ಮಾಡುತ್ತಿದ್ದರು. ತಮ್ಮ ಲೇಖನಗಳಿಗೆ ಕೊಡುತ್ತಿದ್ದ ತಲೆಬರಹಗಳು ಹಾಗೂ ಬರವಣಿಗೆಗಳು ಮಾದರಿಯಾಗಿದ್ದವು. ಪತ್ರಕರ್ತರಾಗಿಯೇ ಅವರು 1983–84 ರಲ್ಲಿ ಶಾಸನ ಸಭೆಯನ್ನು ಪ್ರವೇಶಿಸಿದ್ದರು ಎಂದು ಈ ಸಂದರ್ಭದಲ್ಲಿ ಸ್ಮರಿಸಿದರು. ನಗರಸಭೆ ಪೌರಾಯುಕ್ತ ಜ್ಯೋತಿ ಗಿರೀಶ ಎಸ್. ಮಾತನಾಡಿ, ಮಾಧ್ಯಮ ಮಿತ್ರರು ಎಚ್ಚರಿಸದೆ ಹೋದರೆ ಅಧಿಕಾರಿಗಳಿಂದ ತಪ್ಪುಗಳು ಮುಂದುವರೆಯುವ ಅಪಾಯವಿರುತ್ತದೆ.

ಅಧಿಕಾರಿಗಳು ತಮ್ಮ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಪತ್ರಿಕೆಗಳು ಸಹಾಯಕವಾಗಿವೆ ಎಂದರಲ್ಲದೆ, ಪತ್ರಿಕಾ ಭವನಕ್ಕೆ ಒಂದು ತಿಂಗಳೊಳಗಾಗಿ ನಗರಸಭೆಯಿಂದ ನಿವೇಶನ ಮಂಜೂರು ಮಾಡಿಸುವುದಾಗಿ ಭರವಸೆ ನೀಡಿದರು.

ಕಾನಿಪ ಸಂಘದ ಜಮಖಂಡಿ ಘಟಕದ ಅಧ್ಯಕ್ಷ ಪೀರ್ ಕೊಡತಿ ಅಧ್ಯಕ್ಷತೆವಹಿಸಿ ಮಾತನಾಡಿದರು. ಕಾನಿಪ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಆನಂದ ದಲಭಂಜನ, ಸಂಘದ ಗೌರವಾಧ್ಯಕ್ಷ ಎಂ. ಸಿ. ಗೊಂದಿ ಮಾತನಾಡಿದರು. ಡಿವೈಎಸ್ಪಿ ಎಸ್. ರೋಷನ್ ಜಮೀರ್, ಕಾನಿಪ ಸಂಘದ ರಾಜ್ಯ ಘಟಕದ ಸದಸ್ಯ ಮಹೇಶ ಅಂಗಡಿ ಉಪಸ್ಥಿತರಿದ್ದರು.

ಲಕ್ಷ್ಮೀಕಾಂತ ದುದಗಿ (ಅಧ್ಯಕ್ಷ), ಅಯ್ಯೂಬ ಕೊರತಿ(ಉಪಾಧ್ಯಕ್ಷ),ರಫೀಕಮಾರಕಪನಳ್ಳಿ (ಕಾರ್ಯದರ್ಶಿ), ಅಪ್ಪು ಪೋತರಾಜ (ಖಜಾಂಚಿ) ನೂತನ ಪದಾಧಿಕಾರಿಗಳಾಗಿ ಪದಗ್ರಹಣ ಮಾಡಿದರು.

ಹಿರಿಯ ಪತ್ರಕರ್ತ ವಿಜಯ ಎಸ್. ಬಿರಾದಾರ ಅವರಿಗೆ ದಿವಂಗತ ಬಾಬುರೆಡ್ಡಿ ವೆಂಕರಡ್ಡಿ ತುಂಗಳ ಅವರ ಸ್ಮರಣಾರ್ಥ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿದ ಗೌರೀಶ ಅವರ ಪ್ರತಿಭಾ ಪುರಸ್ಕಾರ, ಪತ್ರಿಕಾ ವಿತರಕರಾದ ನವೀನ ಕಟ್ಟಿಮನಿ, ಸೂರ್ಯಕಾಂತ ಕಡಕೋಳ ಅವರ ಸನ್ಮಾನ ನೆರವೇರಿಸಲಾಯಿತು.

ವಿಜಯಲಕ್ಷ್ಮಿ ದುದಗಿ ಪ್ರಾರ್ಥನೆ ಗೀತೆ ಹಾಡಿದರು. ಗೌರವಾಧ್ಯಕ್ಷ ಡಾ. ಟಿ. ಪಿ. ಗಿರಡ್ಡಿ ಸ್ವಾಗತಿಸಿದರು. ನಿರ್ಗಮಿತ ಕಾರ್ಯದರ್ಶಿ ಅಪ್ಪು ಪೋತರಾಜ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ಉಪಾಧ್ಯಕ್ಷ ಡಾ. ಮಲ್ಲಿಕಾರ್ಜುನ ಮಠ ಬಿನ್ನವತ್ತಳೆ ಓದಿದರು. ಶ್ರೀನಿವಾಸ ಕಟ್ಟಿಮನಿ ಸೊಗಸಾಗಿ ನಿರೂಪಿಸಿದರು. ಶಿವಾನಂದ ಕೊಣ್ಣೂರ ವಂದಿಸಿದರು.

## ವಚನ ಸಾಹಿತ್ಯವನ್ನು ಉಳಿಸಿ ಬೆಳೆಸಬೇಕಾಗಿದೆ



**ರಬಕವಿ–ಬನಹಟ್ಟಿ** : ಇಂದಿನ ದಿನಗಳಲ್ಲಿ ವಚನ ಸಾಹಿತ್ಯವನ್ನು ಉಳಿಸಿ ಬೆಳೆಸಬೇಕಾಗಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರು ತಮ್ಮ ಮಕ್ಕಳಿಗೆ ಶರಣರ ವಚನಗಳನ್ನು ಕಲಿಸಬೇಕು. ಇದುವೇ ನಾವು ಡಾ. ಹಳಕಟ್ಟಿಯವರಿಗೆ ಸಲ್ಲಿಸುವ ಗೌರವ ಎಂದು ತಹಶೀಲ್ದಾರ ಗಿರೀಶ ಸ್ವಾದಿ ತಿಳಿಸಿದರು.

ಬುಧವಾರ ರಬಕವಿ–ಬನಹಟ್ಟಿ ತಹಶೀಲ್ದಾರ್ ಕಾರ್ಯಾಲಯದಲ್ಲಿ ನಡೆದ ವಚನ ಸಂರಕ್ಷಣಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಮಾತನಾಡಿದರು.

ಹಿರಿಯ ಸಾಹಿತಿ ಸಿದ್ಧರಾಜ ಪೂಜಾರಿ ಮಾತನಾಡಿ, ಕನ್ನಡ ಸಾರಸ್ವತ ಲೋಕದಲ್ಲಿ ವಚನ ಚಳುವಳಿಗೆ ಮಹತ್ತರ ಸ್ಥಾನವಿದೆ. ಕಲ್ಯಾಣ ಕ್ರಾಂತಿಯ ನಂತರ ಎಲ್ಲ ಶರಣರು ಚದುರಿ ಹೋದರು.

ಉಳವಿ ಕ್ಷೇತ್ರ ವಚನಗಳ ರಕ್ಷಣಾ ಕೇಂದ್ರವಾಯಿತು. ಇಪ್ಪತ್ತನೆಯ ಶತಮಾನದಲ್ಲಿ ನಶಿಸಿ ಹೋಗಬಹುದಾಗಿದ್ದ ಈ ವಚನಗಳನ್ನು ಅಪಾರ ಕಷ್ಟ ಪಟ್ಟು ಸಂಗ್ರಹಿಸಿ ಮಹಾನ್ ಕಾರ್ಯ ಮಾಡಿದವರು ಹಳಕಟ್ಟಿಯವರು.

ಒಂದು ವಿಶ್ವ ವಿದ್ಯಾಲಯದವರು ಮಾಡುವ ಕಾರ್ಯವನ್ನು ಡಾ. ಹಳಕಟ್ಟಿಯವರು ಅಪಾರ ಪರಿಶ್ರಮದಿಂದ ಮಾಡಿದ್ದಾರೆ ಎಂದು ತಿಳಿಸಿದರು.

ಶಿವಾನಂದ ಬಾಗಲಕೋಟಮಠ,

ಬಿ. ಎಂ. ಹಳೇಮನಿ, ಶಿರಸ್ತೆದಾರರಾದ ಎಸ್. ಎಂ. ಕೂಗಾಟೆ, ಆರ್. ಎಸ್. ಸಾತಿಹಾಳ, ಪ್ರಕಾಶ ಮಠಪತಿ, ಸದಾಶಿವ ಕುಂಬಾರ, ಚೇತನ ಭಜಂತ್ರಿ, ಪ್ರಕಾಶ ವಂದಾಲ, ರಾಕೇಶ ಕೊನಸಿರಸಗೆ, ಸಂಗಮೇಶ ಸಜ್ಜನ, ದೀಪಾ ಮೇತ್ರಿ ಸೇರಿದಂತೆ ಇನ್ನೂ ಅನೇಕರು ಹಾಜರಿದ್ದರು.

# ಬೆಳೆ ವಿಮೆ ಯೋಜನೆಗೆ ನೋಂದಣಿಗೆ ಮನವಿ

**ವಿಜಯಪುರ :** 2025–26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿದಾಳಿಂಬೆ,ಲಿಂಬೆ,ಹಾಗೂದ್ರಾಕ್ಷಿಬೆಳೆಗೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯನ್ನು ಅನುಷ್ಠಾನಗೊಳಿಸಲು ಅಧಿಸೂಚಿಸಲಾಗಿದೆ.

ಬೆಳೆಸಾಲಪಡೆದರೈತರುಹಾಗೂಬೆಳೆಸಾಲಪಡೆಯದೆ ಇರುವರೈತರುತಮ್ಮಆಧಾರ್‌ಕಾರ್ಡ್,ಋುರಾಕ್ಸ್,ಪಹಣಿ ಪತ್ರಿಕೆ ಹಾಗೂ ಬ್ಯಾಂಕ್ ಪಾಸ್‌ಬುಕ್ ಪ್ರತಿಯೊಂದಿಗೆ ಹತ್ತಿರದ ಬ್ಯಾಂಕ್‌ಗಳಲ್ಲಿ ಅಥವಾ ಗ್ರಾಮ ಒನ್ ಕೇಂದ್ರ, ಸಿಎಸ್‌ಸಿ ಸೆಂಟರ್‌ಗಳಲ್ಲಿ ವಿಮಾ ಯೋಜನೆಯಡಿ ನೋಂದಾಯಿಸಿಕೊಳ್ಳಬಹುದಾಗಿದೆ.

ದ್ರಾಕ್ಷಿ ಬೆಳೆ ವಿಮೆಗೆ ನೋಂದಾಯಿಸಿಕೊಳ್ಳಲು ಸೆಪ್ಟೆಂಬರ್ 15 ಕೊನೆಯ ದಿನವಾಗಿರುತ್ತದೆ. ರೈತರು ಪ್ರತಿ ಹೆಕ್ಟೆರಿಗೆ ಪಾವತಿಸಬೇಕಾದ ವಿಮಾ ಕಂತಿನ ಮೊತ್ತ 14,000 ರೂ.ಗಳಾಗಿದೆ. ದಾಳಿಂಬೆ ಬೆಳೆ ವಿಮೆಗೆ ನೋಂದಾಯಿಸಿಕೊಳ್ಳಲು ಜೂನ್ 30 ಕೊನೆಯ ದಿನವಾಗಿದ್ದು, ರೈತರು 6,350ರೂ.ಗಳನ್ನು ವಿಮಾ ಕಂತು ತುಂಬಬೇಕು. ಲಿಂಬೆ ಬೆಳೆಗೆ ವಿಮೆ ನೋಂದಾಯಿಸಿಕೊಳ್ಳಲು ಜೂನ್ 30 ಕೊನೆಯ ದಿನವಾಗಿದ್ದು, ವಿಮಾ ಕಂತಿನ ಮೊತ್ತ 2,800ರೂ.ಗಳನ್ನು ಪಾವತಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ತೋಟಗಾರಿಕೆ ಇಲಾಖೆ, ರೈತ ಸಂಪರ್ಕ ಕೇಂದ್ರ, ಹತ್ತಿರದ ಬ್ಯಾಂಕ್ ಶಾಖೆಯನ್ನು,ಹಾಗೂಅಗ್ರಿಕಲ್ಚರಲ್ ಇನ್ಸುರೆನ್ಸ್‌ಕಂಪನಿ ವಿಮಾ ಸಂಸ್ಥೆಯ ಪ್ರತಿನಿಧಿ (ಮೊ: 8310939753), ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ವಿಜಯಪುರ (ಮೊ:9535185999),ಇಂಡಿ (ಮೊ:9008404041), ಸಿಂದಗಿ (ಮೊ:7795952653), ಬಸವನ ಬಾಗೇವಾಡಿ (ಮೊ:9845215362) ಮುದ್ದೇಬಿಹಾಳ (ಮೊ:9620578551) ಸಂಪರ್ಕಿಸಬಹುದು ಎಂದು ವಿಜಯಪುರ ತೋಟಗಾರಿಕೆ ಉಪ ನಿರ್ದೇಶಕರಾದ ರಾಹುಲ್‌ಕುಮಾರ್ ಬಾವಿದೊಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಲ ಪುರಸ್ಕಾರ: ಅರ್ಜಿ ಆಹ್ವಾನ

**ವಿಜಯಪುರ :** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯದಿಂದ 2025ನೇ ಸಾಲಿನ ರಾಷ್ಟ್ರೀಯ ಪ್ರಧಾನ ಮಂತ್ರಿ ಬಾಲ ಪುರಸ್ಕಾರ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಧೈರ್ಯ ಮತ್ತು ಸಾಹಸದಿಂದ ಇತರರನ್ನು ರಕ್ಷಿಸಿದ ಹಾಗೂ ಕ್ರೀಡೆ, ಸಮಾಜ ಸೇವೆ, ತಂತ್ರಜ್ಞಾನ, ಕಲೆ, ಸಂಸ್ಕೃತಿ, ಪರಿಸರ ಸಂರಕ್ಷಣೆ, ಮತ್ತು ನೂತನ ಆವಿಷ್ಕಾರಗಳನ್ನು ಮಾಡಿ ಉತ್ತಮ ಸಾಧನೆ ತೋರಿದ 05 ವರ್ಷ ಮೇಲ್ಪಟ್ಟ 18 ವರ್ಷದೊಳಗಿನ ಮಕ್ಕಳು ಜುಲೈ 31, 2025 ರೊಳಗಾಗಿ https://awards.gov.in ಮೂಲಕ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲೆಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ಕಸಾಪ ಅಧ್ಯಕ್ಷರಿಗೆ ಸಂಪುಟ ದರ್ಜೆಯ ಸ್ಥಾನಮಾನ ನೀಡಿ: ಲಾಯಪ್ಪ ಇಂಗಳೆ

**ವಿಜಯಪುರ :** ಕನ್ನಡ ಸಾಹಿತ್ಯ ಪರಿಷತ್ತಿನ ಚುನಾಯಿತ ರಾಜ್ಯ ಘಟಕದ ಅಧ್ಯಕ ನಾಡೋಜ ಮಹೇಶ ಜೋಶಿ ಅವರಿಗೆ ಹಿಂದಿನ ಸರ್ಕಾರ ಸಂಪುಟ ದರ್ಜೆಯ ಸ್ಥಾನಮಾನ ನೀಡಿ ಕನ್ನಡದ ಕೆಲಸಕ್ಕೆ ಪ್ರೋತ್ಸಾಹಿಸಿತ್ತು. ಸದ್ಯ ಮುಖ್ಯಮಂತ್ರಿ ಸಿದ್ಧರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಿಗೆ ನೀಡಿದ ಸಂಪುಟ ದರ್ಜೆಯ ಸ್ಥಾನವನ್ನು ಹಿಂಪಡೆದಿರುವ ಪುನಃ ನೀಡಬೇಕೆಂದು ಒತ್ತಾಯಿಸಿ ವಿಜಯಪುರ ಜಿಲ್ಲಾಧಿಕಾರಿಗಳ ಮೂಲಕ ಘನತವೆತ್ತ ರಾಜ್ಯಪಾಲ–ರಿಗೆ ಹಾಗೂ ಮುಖ್ಯಮಂತ್ರಿಗಳಿಗೆ ಕನ್ನಡದ ಕಟ್ಟಾಳು ಗಂಗಾಧರ ಕೋರಳ್ಳಿ ಪ್ರತಿಷ್ಠಾನದ ಕಾರ್ಯದರ್ಶಿ ಲಾಯಪ್ಪ ಇಂಗಳೆ ಅವರು ಮನವಿ ಸಲ್ಲಿಸಿದ್ದಾರೆ.

ಈ ಕುರಿತು ಮನವಿ ಮಾಡಿಕೊಂಡಿರುವ ಅವರು, ಮೈಸೂರಿನ ನಾಲ್ವಡಿ ಕೃಷ್ಣರಾಜ ಒಡೆಯರ್ ಹಾಗೂ ಸರ್. ಎಂ.ವಿಶ್ವೇಶ್ವರಯ್ಯನವರು ಸ್ಥಾಪಿಸಿದ ಕನ್ನಡ ನಾಡಿನ ಪ್ರಾತಿನಿಧಿಕ ಸಂಸ್ಥೆಯಾದ ಕನ್ನಡ ಸಾಹಿತ್ಯ ಪರಿಷತ್ತು ಶತಮಾನ ಪೂರೈಸಿದ ಕನ್ನಡದ ಹೆಮ್ಮೆಯ ಸಂಸ್ಥೆಯಾಗಿದೆ. ಕನ್ನಡ ಸಾಹಿತ್ಯ ಪರಿಷತ್ತು ಅನೇಕ ಹಿರಿಯ ಸಾಹಿತಿಗಳು ಹಾಗೂ ನಾಡು ನುಡಿಗಾಗಿ ಶ್ರಮಿಸಿದ ಹಿರಿಯರ ಮಾರ್ಗದರ್ಶನದಲ್ಲಿ ನಾಡಿನಲ್ಲಿ ಕನ್ನಡವನ್ನು ಕಟ್ಟಿ ಬೆಳೆಸುವ, ಉಳಿಸುವ ಕೆಲಸ ಮಾಡುತ್ತಾ ಬಂದಿರುವುದು ಅದರ ಹಿರಿಮೆಗೆ ಹಿಡಿದ ಕೈಗನ್ನಡಿಯಾಗಿದೆ ಎಂದು ಅವರು ಮನವಿಯಲ್ಲಿ ತಿಳಿಸಿದ್ದಾರೆ. ಮುಖ್ಯಮಂತ್ರಿ ಸಿದ್ಧರಾಮಯ್ಯನವರು ತಮ್ಮ ಹಿಂಬಾಲಕರ ಮಾತನ್ನು ಕೇಳಿ ಸಾಹಿತ್ಯ ಪರಿಷತ್ತಿನಲ್ಲಿರಾಜಕೀಯಮಾಡಲುಹೊರಟಿರುವುದು ಪರಿಷತ್ತಿನ ಇತಿಹಾಸದಲ್ಲಿಯೇ ಕಪ್ಪು ಚುಕ್ಕೆಯಾಗಿದೆ. ಕೂಡಲೇ ಈ ಹಿಂದಿನಂತೆ ಸಂಪುಟ ದರ್ಜೆಯ ಸ್ಥಾನಮಾನವನ್ನು ಮುಂದುವರೆಸಿ ಕನ್ನಡ ಕಟ್ಟುವ ಕೆಲಸಕ್ಕೆ ಅನುಕೂಲ ಮಾಡಿಕೊಟ್ಟು, ತಾವು ಅಪ್ಪಟ ಕನ್ನಡ ಪ್ರೇಮಿ ಎಂದು ಸಾಬೀತು ಪಡಿಸಬೇಕು ಎಂದು ಮನವಿ ಪತ್ರದಲ್ಲಿ ಇಂಗಳೆ ಅವರು ಆಗ್ರಹಿಸಿದ್ದಾರೆ.

# ಬಬಲೇಶ್ವರ ಕ್ಷೇತ್ರದ ಸಮಗ್ರ ನೀರಾವರಿಗೆ ಬದ್ಧ: ಸಚಿವ ಎಂ.ಬಿ. ಪಾಟೀಲ

**ವಿಜಯಪುರ :** ಬಬಲೇಶ್ವರ ಮತಕ್ಷೇತ್ರದಲ್ಲಿ ಯೋಜನೆಗಳಿಗೆ ಅನುಕೂಲವಿರುವ ಎಲ್ಲ ಸ್ಥಳಗಳಲ್ಲಿಕೆರೆಮತ್ತುಬಾಂದಾರನಿರ್ಮಿಸುವ ಮೂಲಕ ನೀರಾವರಿ ಮಾಡಲಾಗುತ್ತಿದೆ ಎಂದುಕೈಗಾರಿಕೆ,ಮೂಲಸೌಲಭ್ಯಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ತಿಳಿಸಿದ್ದಾರೆ.

ಶನಿವಾರಮುಸ್ಸಂಜೆಬಬಲೇಶ್ವರತಾಲೂಕಿನ ಸಂಗಾಪುರ ಎಸ್. ಎಚ್. ಬಳಿ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ ವತಿಯಿಂದ ರೂ. 220 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾಗುತ್ತಿರುವ ಜಿನುಗು ಕೆರೆ ಯೋಜನೆಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಬಬಲೇಶ್ವರ ಮತಕ್ಷೇತ್ರದಲ್ಲಿ ಈಗಾಗಲೇ ಯೋಜನೆಗಳಿಗೆ ಸೂಕ್ತವಾದ ಪ್ರದೇಶಗಳಲ್ಲಿ ಕೆರೆ, ಇಂಗು ಕೆರೆ, ಬಾಂದಾರ ನಿರ್ಮಿಸಲಾಗಿದೆ. ಸಂಗಾಪುರ ಎಸ್. ಎಚ್. ಗ್ರಾಮಕ್ಕೆಅಗತ್ಯವಾಗಿರುವಮತ್ತೊಂದುಕೆರೆ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು. ಗ್ರಾಮದ ಬಳಿ ಅಗತ್ಯವಾಗಿರುವ ಸೇತುವೆ ನಿರ್ಮಾಮ ಯೋಜನೆಯನ್ನು ಈಗಾಗಲೇ ನಬಾರ್ಡ್ ಯೋಜನೆಯಡಿ ಸೇರಿಸಲಾಗಿದೆ. ಪ್ರಗತಿಪಥ ಯೋಜನೆಯಡಿ ಇನ್ನೊಂದು ರಸ್ತೆ ನಿರ್ಮಿಸಲಾಗುವುದು. ಸಂಗಾಪುರ



ಎಸ್. ಎಚ್. ಗ್ರಾಮ ಸಣ್ಣದಾದರೂ ಇಲ್ಲಿನ ಜನ ಶ್ರಮಜೀವಿಗಳಾಗಿದ್ದು, ಕೃಷಿಗೆ ಆದ್ಯತೆ ನೀಡುವ ಮೂಲಕ ಬಾಳನ್ನು ಹಸನು ಮಾಡಿಕೊಂಡಿದ್ದಾರೆ. ಗ್ರಾಮಸ್ಥರಗಿ ನನ್ನ ಬಗ್ಗೆ ಅಪಾರ ಕಾಳಜಿಯಿದ್ದು, ನನಗೂ ಗ್ರಾಮದ ಮೇಲೆ ಅವರಷ್ಟೇ ಪ್ರೀತಿಯಿದೆ. ಗ್ರಾಮದ ಮಠದ ಬಾಕಿ ಕಾಮಗಾರಿಗೆ ಅನುದಾನ ಒದಗಿಸಲಾಗುವುದು ಎಂದು ಸಚಿವರು ತಿಳಿಸಿದರು.

ಸಂಗಾಪುರ ಎಸ್. ಎಚ್. ಗ್ರಾಮದ ಮುಖಂಡ ರಮೇಶ ಬದ್ರಿ ಮಾತನಾಡಿ, ಗ್ರಾಮಸ್ಥರು ಪ್ರತಿಬಾರಿಯೂ ಸಚಿವ ಎಂ. ಬಿ. ಪಾಟೀಲ ಅವರಿಗೆ ಹೆಚ್ಚೆಚ್ಚು ಬೆಂಬಲ ನೀಡುತ್ತ ಬಂದಿದ್ದಾರೆ. ಹೀಗಾಗಿ ಅವರು ನಮ್ಮ ಸಣ್ಣ ಗ್ರಾಮಸ್ಥರ ಬೇಡಿಕೆಗೆ ಸಕಲ ರೀತಿಯಿಂದಲೂ ಸ್ಪಂದಿಸುತ್ತಿದ್ದಾರೆ ಎಂದು ಹೇಳಿದರು.

ಕಮರಿಮಠದ ಶ್ರೀ ಅಭಿನವ ಸಿದ್ಧಲಿಂಗ ಸ್ವಾಮೀಜಿ ಮಾತನಾಡಿ, ಸಚಿವ ಎಂ. ಬಿ. ಪಾಟೀಲ ಅವರು ಬಸವನಾಡಿನ ಭಗೀರಥರಾಗಿದ್ದು, ತಮಗೆ ವಹಿಸಿರುವ ಪ್ರತಿಯೊಂದು ಖಾತೆಗೆ ನ್ಯಾಯ ಒದಗಿಸುವ ಮೂಲಕ ಆ ಖಾತೆಗಳಿಗೆ ಮೆರಗು ತರುವ ಕೆಲಸ ಮಾಡುತ್ತಿದ್ದಾರೆ. ಈ ಮೂಲಕ ವಿಜಯಪುರ ಜಿಲ್ಲೆಯ ಹೆಸರನ್ನು ಎತ್ತಿ ಹಿಡಿಯುವ ಕೆಲಸ ಮಾಡಿದ್ದಾರೆ ಎಂದು ಹೇಳಿದರು. ಸಣ್ಣ ನೀರಾವರಿ ಇಲಾಖೆಯ ಎಂಜಿನಿಯರ್ ಸಾಹೇಬಗೌಡ ಬಿರಾದಾರ ಮಾತನಾಡಿ, 4.50 ಎಕರೆ ಎಕರೆ ಪ್ರದೇಶದಲ್ಲಿ ನಿರ್ಮಿಸಲಾಗುತ್ತಿರುವ ಈ ಕೆರೆಯು ಸುಮಾರು 125ಎಕರೆ ಭೂಮಿಗೆ ನೀರಾವರಿ ಕಲ್ಪಿಸಲಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಂದಿ ಸಹಕಾರಿ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಆನಂದಕುಮಾರ ಸಿ. ದೇಸಾಯಿ, ಮುಖಂಡರಾದ ಮುತ್ತಪ್ಪ ಶಿವಣ್ಣವರ, ಶ್ರೀಶೈಲಗೌಡ ಪಾಟೀಲ ನಿಡೋಣಿ, ಚನ್ನಪ್ಪ ಕೊಪ್ಪದ, ವಿ. ಎಸ್. ಪಾಟೀಲ, ಬಸವರಾಜ ದೇಸಾಯಿ, ಮಲ್ಲು ದಳವಾಯಿ, ಜಗದೀಶ ಹಿರೇದೇಸಾಯಿ ಜೈನಾಪುರ, ಶಂಕರಗೌಡ ಪಾಟೀಲ, ಅಪ್ಪುಗೌಡ ಪಾಟೀಲ ಶೇಗುಣಸಿ, ಡಾ. ಕೆ. ಎಚ್. ಮುಂಬಾರೆಡ್ಡಿ, ಮಹಾದೇವಪ್ಪ ಮದರಖಂಡಿ, ರಾಮಲಿಂಗ ಕೊಕಟನೂರ, ರಾಜು ಬದ್ರಿ ಮುಂತಾದವರು ಉಪಸ್ಥಿತರಿದ್ದರು.

# ಬಿಎಲ್‌ಓ ಕೆಲಸದಿಂದ ಮುಕ್ತಗೊಳಿಸಲು ಆಗ್ರಹಿಸಿ ಅಂಗನವಾಡಿ ಕಾರ್ಯಕರ್ತೆಯರ ಪ್ರತಿಭಟನೆ

**ವಿಜಯಪುರ :** ಅಂಗನವಾಡಿ ಕಾಯಕರ್ತೆಯರಿಗೆ ಈ ಬಿ.ಎಲ್.ಓ ಕೆಲಸದಿಂದ ಬಿಡುಗಡೆ ಮಾಡುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ ಸಿಐಟಿಯು ವತಿಯಿಂದ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೆಣ್ಣೂರ ಅವರಿಗೆ ಮನವಿ ಸಲ್ಲಿಸಲಾಯಿತು.

ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘ ಜಿಲ್ಲಾಧ್ಯಕ್ಷೆ ಸುನಂದಾ ನಾಯಕ ಮಾತನಾಡಿ, ವಿಜಯಪುರ ತಾಲೂಕಿನ ಕೆಲವೊಂದು ಅಂಗನವಾಡಿ ಕಾರ್ಯಕರ್ತೆಯರು ಹಲವು ವರ್ಷಗಳಿಂದ ಬಿ.ಎಲ್.ಓ ಕೆಲಸ ಮಾಡುತ್ತಿದ್ದೇವೆ. ಈಗ ರಾಜ್ಯ ಚುನಾವಣೆ ಆಯೋಗದ ಪತ್ರದ ಪ್ರಕಾರ ಸಿಂದಗಿಯಲ್ಲಿ ಮತಕ್ಷೇತ್ರ ಅಂಗನವಾಡಿ ಕಾರ್ಯಕರ್ತೆಯರನ್ನು ಬಿ.ಎಲ್.ಓ ಕೆಲಸದಿಂದ ಮುಕ್ತಗೊಳಿಸಿ ಸರಕಾರಿ ಪ್ರಾಥಮಿಕ ಶಾಲೆಯ ಗುರುಗಳನ್ನು ನೇಮಕ ಮಾಡಿದ್ದಾರೆ. ಇದರಂತೆಯೇ ತಾವು ನಮ್ಮನ್ನು ಬಿ.ಎಲ್.ಓ ಕೆಲಸದಿಂದ ಮುಕ್ತಿ ಮಾಡಬೇಕು. ಈಗ ಕೇಂದ್ರ ಸರ್ಕಾರದ ಪೋಷಣ ಟ್ರ್ಯಾಕರ್‌ನಲ್ಲಿ



ಹೊಸದಾಗಿ ಅಳವಡಿಸಿರುವ ಎಫ್.ಆರ್.ಎಸ್ ಹಾಕಬೇಕು. ಹಲವಾರು ತಾಂತ್ರಿಕ ದೋಷ ಇರುವುದರಿಂದ ಪೋಷಣ ಪಕ್ವಾಡ್, ಪೇಸ್ ವ್ಯಾಲು ಪೋಷಣ ಟ್ರ್ಯಾಕರ ಮುಖಾಂತರ ಪ್ರತಿನಿತ್ಯ ಒತ್ತಡ ಕೆಲಸ ನಿರ್ವಹಿಸಬೇಕಾಗುತ್ತದೆ, ಅಂಗನವಾಡಿ ಕೇಂದ್ರದಲ್ಲಿ ಶಾಲಾಪೂರ್ವ ಶಿಕ್ಷಣ ಪೌಷ್ಠಿಕ ಆಹಾರ ವಿತರಣೆ, ಗರ್ಭಿಣಿ–ಬಾಣಂತಿಯರಿಗೆ 6 ತಿಂಗಳು 3 ವರ್ಷದ ಮಕ್ಕಳ ಮನೆಗೆ ಆಹಾರ ಕೊಡುವದು ಮತ್ತು ತಾಯಿಂದಿರ ಸಭೆಗಳು ಇತ್ಯಾದಿ ಅಂಗನವಾಡಿ ಕಾರ್ಯಕರ್ತೆಯರು ಕೆಲಸ ನಿರ್ವಹಿಸುತಿದ್ದಾರೆ ಐ.ಸಿ. ಡಿ. ಎಸ್ ಯೋಜನೆಯ ಎಲ್ಲ ಕೆಲಸ ನಾವು ಮಾಡುತ್ತಿದ್ದೇವೆ. ಆಯ್.ಸಿ.ಡಿ.ಎಸ್ ಕೆಲಸಕ್ಕೆ ಸಮಯಬೇಕಾಗುತ್ತದೆ.ನಮ್ಮಯೋಜನೆಯ (ಐ.ಸಿ.ಡಿ.ಎಸ್) ಕೆಲಸ ಬಿಟ್ಟು ಬೇರೆ ಕೆಲಸ (ಬಿ.ಎಲ್.ಓ) ಗಳನ್ನು ಮಾಡುವದರಿಂದ 3 ತಿಂಗಳ 6 ವರ್ಷದ ಮಕ್ಕಳ ಹಾಜರಾತಿ ಕುಂಠಿತ (ಕಡಿಮೆ) ಯಾಗುತ್ತಿದೆ ಎಂದು ಹೇಳಿದರು.

ಐ.ಸಿ.ಡಿ.ಎಸ್ ಯೋಜನೆಯಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಶೇ.70ರಷ್ಟು ವಿಧವೆಯರು ಕಡುಬಡವರು ಹಾಗೂಗಂಡನದೌರ್ಜನ್ಯದಿಂದಹಲವಾರು ಚಟಗಳಿಗೆ ಒಳಗಾಗಿ ಡೈವರ್ಸ್ ಆದವರು ಇರುತ್ತೇವೆ. ನಮ್ಮ ಮೇಲೆ ಮಕ್ಕಳ ಶಿಕ್ಷಣ, ಆರೋಗ್ಯ ಮನೆ ಖರ್ಚು ಪಾಲನೆ ಪೋಷಣೆ ಅಂಗನವಾಡಿ ಕಾರ್ಯಕರ್ತೆಯರ ಮೇಲೆಯೇ ಇರುತ್ತದೆ. ಕೆಲವರಿಗೆ ಮಾನಸಿಕ ನೆಮ್ಮದಿ ಇಲ್ಲದಂತಾಗಿದೆ ಮತ್ತು ಹಲವಾರು ರಕ್ತದೊತ್ತಡ (ಬಿ.ಪಿ) ಶುಗರ, (ಸಕ್ಕರೆ ಕಾಯಿಲೆ) ಕಾಯಿಲೆ ಇರುವದರಿಂದ ಬಿ.ಎಲ್.ಓ ಕೆಲಸ ಮಾಡಲು ಆಗುತ್ತಿಲ್ಲ. ನಮ್ಮೆಲ್ಲರಅಂಗನವಾಡಿಕಾರ್ಯಕರ್ತೆಯರ ಕಷ್ಟಗಳನ್ನು ತಮಗೆ ವಿನಂತಿಪೂರ್ವಕವಾಗಿ ಹೇಳುತ್ತಿದ್ದೇವೆ. ದಯಾಳುಗಳಾದ ತಾವು ನಮಗೆ ಬಿ.ಎಲ್.ಓ ಕೆಲಸದಿಂದ ಮುಕ್ತ ಮಾಡಬೇಕು ಎಂದರು. ಈ ಸಂದರ್ಭದಲ್ಲಿ ಗೌರವ ಅಧ್ಯಕ್ಷೆ ಭಾರತಿ ವಾಲಿ, ಪ್ರಧಾನ ಕಾರ್ಯದರ್ಶಿ ಅಶ್ವಿನಿ ತಳವಾರ, ಶೋಭಾ ಕಬಾಡೆ, ಲಕ್ಷ್ಮಣ ಹಂದ್ರಾಳ, ಸಿಐಟಿಯು ಪ್ರಧಾನ ಕಾರ್ಯದರ್ಶಿ, ಸುರೇಶ ಜಿ.ಬಿ, ಸುವರ್ಣಾ ಹಲಗಣಿ, ಶೈಲಾ ಕಟ್ಟಿ, ಎಸ್. ಎಂ. ಜಮಾದಾರ, ಸಾವಿತ್ರಿ ಗುಮಾಸ್ತೆ, ಮೈನುನಿಸಾ ಪಟೇಲ, ಕೀರ್ತಿ ಕುಲಕರ್ಣಿ, ಜಯಶ್ರೀ ಪೂಜರಿ, ರಾಜೇಶ್ವರಿ ಸಂಖದ, ಈರಣ್ಣ ಬೆಳ್ಳುಂಡಗಿ ಮತ್ತಿತರರು ಉಪಸ್ಥಿತರಿದ್ದರು.

# ಬೆಂಗಳೂರು ನಗರ ವಿವಿಗೆ ಮನಮೋಹನ್ ಸಿಂಗ್ ಹೆಸರು

**ಚಿಕ್ಕಬಳ್ಳಾಪುರ :** ಬೆಂಗಳೂರು ಗ್ರಾಮಾಂತರ ಜಿಲ್ಲೆಯನ್ನು ಬೆಂಗಳೂರು ಉತ್ತರ ಜಿಲ್ಲೆ ಎಂದು, ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿಯನ್ನು ಭಾಗ್ಯನಗರ ಎಂದು ಮರು ನಾಮಕರಣ ಮಾಡಲು ಹಾಗೂ ಬೆಂಗಳೂರು ನಗರ ವಿಶ್ವವಿದ್ಯಾಲಯಕ್ಕೆ ಡಾ.ಮನಮೋಹನ್ ಸಿಂಗ್ ಅವರ ಹೆಸ–ರಿಡಲು ಬುಧವಾರ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ.

ನಂದಿ ಗಿರಿಧಾಮದಲ್ಲಿ ತಮ್ಮ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ದೇಶದ ಪ್ರಧಾನಿಗಳಾಗಿ ಬೆಂಗಳೂರು ನಗರದ ಅಭಿವೃದ್ಧಿಗೆ ಸಾಕಷ್ಟು ಯೋಜನೆ ಮತ್ತು ಕೊಡುಗೆಗಳನ್ನು ನೀಡಿದ್ದ ಆರ್ಥಿಕ ತಜ್ಞ,ಡಾ. ಮನಮೋಹನ್ ಸಿಂಗ್ ಅವರನ್ನು ಸ್ಮರಿಸಿ, ಗೌರವಿಸುವ ಕೆಲಸ ಮಾಡುವುದು ಒಂದು ಸರ್ಕಾರವಾಗಿ ಮಾತ್ರವಲ್ಲ, ಕನ್ನಡಿಗನಾಗಿಯೂ ನನ್ನ ಕರ್ತವ್ಯ.

ಈ ನಿಟ್ಟಿನಲ್ಲಿ ಇಂದು ನಡೆದ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಬೆಂಗಳೂರು ನಗರ ವಿಶ್ವವಿದ್ಯಾಲಯಕ್ಕೆ ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯ ಎಂದು ಮರುನಾಮಕರಣ ಮಾಡಲು ತೀರ್ಮಾನಿಸಲಾಗಿದೆ ಎಂದರು.

ಶೇ.90 ರಷ್ಟು ಬೆಂಗಳೂರು ವಿಭಾಗದ ವಿಷಯಗಳನ್ನೇ ಈ ವಿಶೇಷ ಸಂಪುಟ ಸಭೆಯಲ್ಲಿ ಚರ್ಚಿಸಿ ನಿರ್ಣಯ ಕೈಗೊಂಡಿದ್ದೇವೆ.

ಒಟ್ಟು 48 ವಿಷಯಗಳು ಚರ್ಚೆಯಾಗಿದ್ದು,



3,400 ಕೋಟಿ ರೂ. ಮೊತ್ತವನ್ನು ಮಂಜೂರು ಮಾಡಿದ್ದೇವೆ. ಈ ಪೈಕಿ 2,050 ಕೋಟಿ ರೂ. ಬೆಂಗಳೂರು ಜಿಲ್ಲಾ ಭಾಗಕ್ಕೆ ಕೊಟ್ಟಿದ್ದೇವೆ ಎಂದು ಸಿಎಂ ತಿಳಿಸಿದರು.

ಎತ್ತಿನಹೊಳೆ ಯೋಜನೆಗೆ ಒಟ್ಟು 23,251 ಕೋಟಿ ಪರಿಷ್ಕೃತ ಅಂದಾಜು ಮಾಡಲಾಗಿದ್ದು, ಇಲ್ಲಿಯವರೆಗೂ 17,147 ಕೋಟಿ ರೂ. ಖರ್ಚಾಗಿದೆ.

ಮೂಲತಃ ಕುಡಿಯುವ ನೀರಿನ ಯೋಜನೆ ಇದಾಗಿದೆ. ಕೆರೆಗಳಿಗೆ ನೀರು ತುಂಬಿಸುವುದು ನಂತರದ ಆದ್ಯತೆ. 24.1 ಟಿಎಂಸಿ ನೀರಿನಲ್ಲಿ ಕುಡಿಯುವ ನೀರಿಗೆ 14 ಟಿಎಂಸಿ ಬೇಕಾಗಿದೆ. ಆದ್ದರಿಂದ ಮೊದಲು ಕುಡಿಯುವ ನೀರನ್ನು ಕೊಡುವ ಯೋಜನೆ ಮುಗಿಸಲು ಸಂಪುಟ ಸಭೆ ತೀರ್ಮಾನ ಮಾಡಿದೆ. ಎರಡು ವರ್ಷಗಳಲ್ಲಿ ಉದ್ದೇಶಿತ ಜಿಲ್ಲೆ, ತಾಲ್ಲೂಕುಗಳಿಗೆ ನೀರು ಕೊಡುತ್ತೇವೆ ಎಂದರು.

9,807 ಕೋಟಿ ರೂ. ಮೊತ್ತದಲ್ಲಿ ಗ್ರಾವಿಟಿ ಮುಖ್ಯ ಕೆನಲ್ ನ ಕೆಲಸ ಶೇ. 85 ರಷ್ಟು ಮಗಿದಿದೆ. ಹೆಚ್ಚುವರಿಯಾಗಿ ಇದಕ್ಕೆ 8,000 ಕೋಟಿ ಬೇಕಾಗಿದೆ. ಬಾಕಿ ಉಳಿದಿರುವುದು ಸುಮಾರು 6,000 ಕೋಟಿ ರೂ. ಒಟ್ಟು 9 ಜಿಲ್ಲೆಗಳ 75 ಲಕ್ಷ ಜನರಿಗೆ ಕುಡಿಯುವ ನೀರು ಕೊಡುತ್ತೇವೆ ಎಂದರು.

ಬೆಂಗಳೂರು ಜಿಲ್ಲೆಗಳ 31 ವಿಷಯಗಳು ಚರ್ಚೆಯಾಗಿದ್ದು, 2,250 ಕೋಟಿ ರೂಪಾಯಿ ಮಂಜೂರು ಮಾಡಲಾಗಿದೆ. ಶಿಕ್ಷಣ, ಆರೋಗ್ಯ, ಕುಡಿಯುವ ನೀರು, ನೀರಾವರಿ ಯೋಜನೆ, ಕೆರೆ ತುಂಬಿಸುವ ಯೋಜನೆಗಳನ್ನೇ ಪ್ರಮುಖವಾಗಿ ಚರ್ಚಿಸಲಾಗಿದೆ ಎಂದು ಸಿಎಂ ತಿಳಿಸಿದರು.

ಪ್ರತೀಜಿಲ್ಲೆಯಲ್ಲಿಕಾರ್ಮಿಕರಮಕ್ಕಳಿಗೆವಸತಿ ಶಾಲೆ ನಿರ್ಮಿಸಲು ತೀರ್ಮಾನಿಸಲಾಗಿದ್ದು, ಇದಕ್ಕೆ 1,125.25 ಕೋಟಿ ಮಂಜೂರು ಮಾಡಲಾಗಿದೆ.

ಹಿಂದುಳಿದ ವರ್ಗದ ಅಭ್ಯರ್ಥಿಗಳು ಐಎಎಸ್, ಐಪಿಎಸ್, ಐಎಫ್ಎಸ್ ಸೇರಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿಗೆ 10 ಕೋಟಿ ರೂ. ವೆಚ್ಚದ ಎರಡು ವಸತಿ ಶಾಲೆಗಳನ್ನು ಬೆಂಗಳೂರಿನಲ್ಲಿ ನಿರ್ಮಿಸಲಾಗುವುದು ಎಂದರು.

ಪ್ರಾಥಮಿಕ ಆರೋಗ್ಯ ಕೇಂದ್ರಗಳಿಲ್ಲದ ಹೊಸ ತಾಲ್ಲೂಕುಗಳಲ್ಲಿ ಸಮುದಾಯ ಆರೋಗ್ಯ ಕೇಂದ್ರಗಳನ್ನು ಆರಂಭಿಸಲು ತೀರ್ಮಾನ ಮಾಡಿದ್ದೇವೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ "ಬೆಂಗಳೂರು ಉತ್ತರ"ಹಾಗೂ ಬಾಗೇಪಲ್ಲಿಗೆ "ಭಾಗ್ಯನಗರ" ಎಂದು ಹೆಸರಿಡಲಾಗುವುದು ಎಂದು ಸಿಎಂ ಹೇಳಿದರು.

ನಾವು ಆಡಳಿತವನ್ನು ಬೆಂಗಳೂರು ಕೇಂದ್ರಿತ ಎಂಬುದನ್ನು ತಪ್ಪಿಸಿ ವಿಕೇಂದ್ರೀಕರಣ ಮಾಡುವುದಕ್ಕಾಗಿಯೆ ಆಯಾ ಭಾಗದ ಸಮಸ್ಯೆಗಳಮೇಲೆಗಮನಹರಿಸಿ,ಅವುಗಳಿಗೆ ಪರಿಹಾರ ನೀಡುವ ಉದ್ದೇಶದಿಂದ ಸಚಿವ ಸಂಪುಟ ಸಭೆಗಳನ್ನು ರಾಜ್ಯದ ಬೇರೆ ಬೇರೆ ಭಾಗಗಳಲ್ಲಿ ನಡೆಸುತ್ತಿದ್ದೇವೆ. ಮೊದಲಿಗೆ ಕಲ್ಬುರ್ಗಿಯಲ್ಲಿ, ಆ ನಂತರ ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆಸಿದ್ದೆವು. ಮೂರನೆಯದಾಗಿ ನಂದಿ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ನಡೆಸುತ್ತಿದ್ದೇವೆ.

ಈ ಸಚಿವ ಸಂಪುಟ ಸಭೆಯಲ್ಲಿ ನಾವು ಒಟ್ಟು 3,400 ಕೋಟಿಗಳಿಗೆ ಅನುಮೋದನೆ ನೀಡಿದ್ದೇವೆ. ಈ ಸಭೆಯಲ್ಲಿ ಆರೋಗ್ಯ, ಶಿಕ್ಷಣ, ಕೃಷಿ, ತೋಟಗಾರಿಕೆ, ನೀರಾವರಿ, ಪ್ರವಾಸೋದ್ಯಮ, ರಸ್ತೆ– ಸೇತುವೆ ಮುಂತಾದ ವಿಷಯಗಳಿಗೆ ಆದ್ಯತೆ ನೀಡಿ ಅನುಮೋದನೆ ನೀಡಲಾಗಿದೆ ಎಂದರು.

# ಡಾ. ಸೋಮಶೇಖರ್ ಕಬ್ಬೇರ್ ರವರ ವರ್ಗಾವಣೆ ಆದೇಶ ಹಿಂಪಡೆಯಲು ಭಗತ್ ಸಿಂಗ್ ರಕ್ತದಾನಿಗಳ ಸಂಘ ಮನವಿ





**ಹೊಸಪೇಟೆ :** ರಾಜ್ಯದ್ಯಂತ ಆರೋಗ್ಯ ಇಲಾಖೆಯಲ್ಲಿ ವರ್ಗಾವಣೆ ಪರ್ವ ಪ್ರಾರಂಭವಾಗಿದ್ದು ಇದರ ಭಾಗವಾಗಿ ಹೊಸಪೇಟೆಯ (100 ಹಾಸಿಗೆ ಆಸ್ಪತ್ರೆ ) ಉಪ ವಿಭಾಗ ಮಟ್ಟದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಹೊಸಪೇಟೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಆಡಿ. ಸೋಮಶೇಖರ್ ಕಬ್ಬೇರ್ ರವರ ವರ್ಗಾವಣೆ ಆದೇಶ ಸಿಂಪಡಿಯ ಬೇಕು ಇಲ್ಲವೇ ಡಾಕ್ಟರ್ ಸೋಮಶೇಖರ್ ರನ್ನು ಮರಳಿ ಆಸ್ಪತ್ರೆಗೆ ಕಳಿಸಿಕೊಳ್ಳಬೇಕು ಎಂದು ಭಗತ್ ಸಿಂಗ್

ರಕ್ತಧಾನಿಗಳ ಸಂಘದ ಮುಖಂಡರ ನೇತೃತ್ವದಲ್ಲಿ ವಿಜಯನಗರ ಜಿಲ್ಲೆಯ ಮಾನ್ಯ ಜಿಲ್ಲಾಧಿಕಾರಿಗಳಿಗೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಡಾಕ್ಟರ್ ಶಂಕರ್ ನಾಯಕ್ ಮತ್ತು ಆಸ್ಪತ್ರೆಯ ವೈದ್ಯಾಧಿಕಾರಿಗಳಾಗಿರುವ ಡಾಕ್ಟರ್ ಹರಿಪ್ರಸಾದ್ ರವರಿಗೆ ಮನವಿ ಪತ್ರವನ್ನು ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಭಗತ್ ಸಿಂಗ್ ರಕ್ತಧಾನಿಗಳ ಸಂಘದ ಅಧ್ಯಕ್ಷರಾದ ಕೆ.ಎಂ.ಸಂತೋಷ್ ಕುಮಾರ್ ಜೊತೆ ಮುಖಂಡರುಗಳಾದ ಹಾಗೂ ರಕ್ತದಾನಿಗಳಾದ ಎಸ್. ವಿಜಯ್ ಕುಮಾರ್ , ಸಿ. ಪ್ರಕಾಶ್ , ಹನುಮಂತಪ್ಪ , ಚನ್ನಬಸವನಗೌಡ , ಬಿ. ಎಸ್.ರುದ್ರಪ್ಪ , ಎಂ. ಸುಭಾಷ್, ಕೆ.ಪುನೀತ್ ಕುಮಾರ್, ವೆಂಕಟೇಶ್ ಕುಲಕರ್ಣಿ, ಫಯಾಜ್ ಮತ್ತು ಇತರೆ ಮುಖಂಡರು ಭಾಗವಹಿಸಿದ್ದರು.

# ಸಣ್ಣ ಮಾರುಕಟ್ಟೆಯ ಮರು ನಿರ್ಮಾಣ ಶೀಘ್ರ ಆರಂಭ: ಶಾಸಕ ನಾರಾ ಭರತ್ ರೆಡ್ಡಿ





**ಬಳ್ಳಾರಿ :** ನಗರದ 11ನೇ ವಾರ್ಡಿನ ವ್ಯಾಪ್ತಿಯ ಸಣ್ಣ ಮಾರುಕಟ್ಟೆಯ ಮರು ನಿರ್ಮಾಣ ಕಾಮಗಾರಿಯನ್ನು ಶೀಘ್ರ ಆರಂಭಿಸಲಾಗುವುದೆಂದು ಶಾಸಕ ನಾರಾ ಭರತ್ ರೆಡ್ಡಿ ತಿಳಿಸಿದರು.

ಗುರುವಾರ ಮಧ್ಯಾಹ್ನ ಸಲಾಂ ಬಳ್ಳಾರಿ ಅಭಿಯಾನದ ಅಂಗವಾಗಿ ಅವರು ಸ್ಥಳಕ್ಕೆ ಭೇಟಿ ನೀಡಿ ಸ್ಥಳೀಯರೊಂದಿಗೆ ಚರ್ಚಿಸಿ

ಅಂದಾಜು 2 ಕೋಟಿ ರೂ.ಗಳ ವೆಚ್ಚದಲ್ಲಿ ಸಣ್ಣ ಮಾರುಕಟ್ಟೆಯ ಕಟ್ಟಡದ ಮರು ನಿರ್ಮಾಣವನ್ನು ಅತ್ಯಾಧುನಿಕ ಮಾದರಿಯಲ್ಲಿ ಮಾಡಲಾಗುವುದು ಎಂದರು.

ಇಡೀ ದಿನ 11ನೇ ವಾರ್ಡಿನ ವಿವಿಧ ಪ್ರದೇಶಗಳಿಗೆ ಸಂಚರಿಸಿದ ಅವರು ಸ್ಥಳೀಯರಿಂದ ಸಮಸ್ಯೆಗಳನ್ನು ಆಲಿಸಿದರು. ಮುಖ್ಯವಾಗಿ ಮೂಲಭೂತ ಸೌಕರ್ಯಗಳಿಗೆ ಸಂಬಂಧಿಸಿ ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಸ್ಥಳದಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಸೂಚನೆ ಮಾಡಿದರು. ಈ ಸಂದರ್ಭ ಸದಸ್ಯರಾದ ನೂರ್ ಮೊಹಮ್ಮದ್, ಮಿಂಚು ಸೀನಾ, ಎಂ.ಪ್ರಭಂಜನಕುಮಾರ್, ಕಾಂಗ್ರೆಸ್ ಮುಖಂಡರಾದ ಸುಬ್ಬರಾಯುಡು, ಬಿಆರೆಲ್ ಸೀನಾ, ಹಗರಿ ಗೋವಿಂದ, ಹೊನ್ನಪ್ಪ, ಎಸ್.ವಾಸುದೇವ ರೆಡ್ಡಿ, ಚಂಪಾ ಚವ್ಹಾಣ್, ಕವಿತಾ, ಥಿಯೇಟರ್ ಶಿವು, ಸ್ಥಳೀಯ ಮುಖಂಡರಾದ ರಾಜ, ಪೆಟ್ರೋಲ್ ವಲಿ, ಶಿವಸ್ವಾಮಿ, ಗೋಪಿ, ಮಾಸ್ ಬಸವ, ಸುಧೀರ್, ಲೋಕೇಶ್, ಕೆ.ಎಂ.ಗುರು ಸಿದ್ದೇಶ್, ಇಸ್ಮಾಯಿಲ್, ನೂರ್ ಸೇರಿದಂತೆ ಹಲವರು ಹಾಜರಿದ್ದರು.

# ಕಳಸಕೊಪ್ಪ ಕೆರೆ ಸೇರದಂತೆ ಎಂಟು ಕೆರೆ ತುಂಬವ ಕಾರ್ಯಕ್ಕೆ ಚಾಲನೆ

**ಕಲಾದಗಿ :** ಈ ಭಾಗದ ಐತಿಹಾಸಿಕ ಕೆರೆಗಳಲ್ಲಿ ಇಲ್ಲಿ ಒಂದಾದ ಕಳಸಕೊಪ್ಪ ಕೆರೆ ಸೇರಿದಂತೆ ಎಂಟು ಕೆರೆಗಳ ತುಂಬ ಕಾರ್ಯಕ್ಕೆ ಬೀಳಗಿ ಶಾಸಕ ಹಟ್ಟಿ ಚಿನ್ನದ ಗಣಿ ನಿಯಮಿತ ಅಧ್ಯಕ್ಷ ಜೆ ಟಿ ಪಾಟೀಲ್ ಬುಧವಾರ ಚಾಲನೆ ನೀಡಿದರು.

ಪ್ರಸ್ತುತ ವರ್ಷದ ಕಳಸಕೊಪ್ಪ ಸೇರಿದಂತೆ ಎಂಟು ಕೆರೆಗಳ ತುಂಬಾ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ಕಳೆದ ವರ್ಷಕ್ಕಿಂತ 15 ದಿವಸ ಮುಂಚಿತವಾಗಿ ಕೆರೆ ತುಂಬುವ ಕಾರ್ಯವನ್ನು ಪ್ರಾರಂಭಿಸಲಾಗಿದೆ.ಕೆರೆತುಂಬುವ ಕಾರ್ಯಕ್ಕೆ ಈಗಾಗಲೇ ಮೂರು



ಮೋಟಾರ್ ಗಳಿಗೆ ಚಾಲನೆ ನೀಡಿದ್ದು. ಮೂರು ಮೋಟಾರ್ ಗಳು ದುರಸ್ತಿ ಕಾರ್ಯದಲ್ಲಿದ್ದು 15 ದಿನ ಒಳಗಾಗಿ ದುರಸ್ತೆ ಕಾರ್ಯ ಪೂರ್ಣಗೊಳಿಸಿ ಎಲ್ಲಾ ಮೋಟಗಳನ್ನುಪ್ರಾರಂಭಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಕೆಪಿಸಿಸಿ ಉಪಾಧ್ಯಕ್ಷ ಎಂಬಿ ಸೌದಾಗರ. ಕಳಸಕೊಪ್ಪ ಕೆರೆ ನೀರು ಬಳಕೆದಾರರ ಸಂಘದ ಅಧ್ಯಕ್ಷ ಸಂಗಣ್ಣ ಮುಧೋಳ. ಕಲಾದಗಿ ಗ್ರಾಂಪಂ ಉಪಾಧ್ಯಕ್ಷ ಪಕೀರಪ್ಪ ಮಾದರ. ಮುಖಂಡರಾದ ನಾರಾಯಣ ಹಾದಿಮನಿ. ಬಂದೇನವಾಜ ಸೌದಾಗರ. ಸಲೀಂ ಶೇಖ. ಧರ್ಮಣ್ಣ ಭಗವತಿ. ಯಂಕಣ್ಣ ಬಿಲಕೇರಿ. ಶ್ಯಾಮ ಕಾಳೆ. ಪಕೀರಪ್ಪ ಮಾದ ಹಿರಿ ಶೆಲ್ಲಿಕೇರಿ. ರಾಜೆಜಸಾಬ ಗೋಟೆ. ಮಲ್ಲಪ್ಪ ಜಮಖಂಡಿ. ರಮೇಶ ಮಾದರ. ಹನುಮಂತ ಗದ್ದನಕೇರಿ. ಅಂಜಲಿ ಭಾನು. ನೀರಾವರಿ ಇಲಾಖೆಯ ಕಾರ್ಯ ಪಾಲನ ಅಭಿಯಂತರ ತಾರಾಸಿಂಗ್ ದೊಡ್ಡಮನಿ. ಕಲಾದಗಿ ಪಂ. ಅಭಿವೃದ್ಧಿ ಅಧಿಕಾರಿ ಬಿ ಎಲ್ ಹವಾಲ್ದಾರ. ಚಿಕ್ಕ ಶೆಲ್ಲಿಕೇರಿ ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ಸೇರಿದಂತೆ ಇತರರು ಇದ್ದರು.

**"SIHI KAHI"** Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State

**Designed by MKG-9535762618**